ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 13-6-2017

ಪತ್ರಿಕಾ ಆಮಂತ್ರಣ

ಪತ್ರಿಕಾಗೋಷ್ಠಿ:

ಸಿದ್ದರಾಮಯ್ಯ
ಮುಖ್ಯಮಂತ್ರಿ , ಕರ್ನಾಟಕ ಸರ್ಕಾರ

ಪ್ರಿಯಾಂಕ್ ಖರ್ಗೆ,
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು

ದಿನಾಂಕ: 14-06-2017 ಬುಧವಾರ, ಬೆಳಗ್ಗೆ 9-30 ಗಂಟೆಗೆ
ಸ್ಥಳ: ಗ್ರೌಂಡ್ ಬಾಲ್ ರೂಂ ಹೋಟೆಲ್ ಜೆಡಬ್ಲೂ ಮೇರಿಯೋಟ್, ವಿಠಲ್ ಮಲ್ಯ ರಸ್ತೆ,
ಯು.ಬಿ. ಸಿ.ಟಿ. ಹತ್ತಿರ, ಬೆಂಗಳೂರು

## ಪತ್ರಿಕಾ ಪ್ರಕಟಣೆ

## ವಿಧಾನ ಪರಿಷತ್ತಿನಲ್ಲಿ ಇಂದು:

ಅರಸೀಕೆರೆ ಶಾಸಕ ಶಿವಲಿಂಗೇಗೌಡ ಕೆ.ಎಂ. ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಾದ ಕೆ.ಜೆ. ಜಾರ್ಜ್, ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ 5000 ವಿವಿಧ ಅಳತೆಯ ನಿವೇಶನನಗಳನ್ನು ಬಿ.ಡಿ.ಎ. ಸಾರ್ವಜನಿಕರಿಗೆ ಹಂಚಿಕೆ ಮಾಡಿದ್ದು, ಇನ್ನೂ 5000 ನಿವೇಶನಗಳನ್ನು ಹಂಚಿಕೆ ಮಾಡಲು ಅಭಿವೃದ್ಧಿ ಪಡಿಸಲಾಗುತ್ತಿದೆ ಎಂದರು. ಅಲ್ಲದೆ ಪ್ರಾಧಿಕಾರದ ವತಿಯಿಂದ ವಿವಿಧ ಮಾದರಿಯ 7809 ಫ್ಲಾಟ್/ವಿಲ್ಲಾಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

ಪ್ರಾಧಿಕಾರವು ನಿಗಧಿಪಡಿಸಿರುವ ಹಂಚಿಕೆ ದರಗಳು ಕೈಗೆಟುಕುವಂತಿದ್ದು, ಆರ್ಥಿಕವಾಗಿ ದುರ್ಬಲರಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅರ್ಜಿದಾರರಿಗೆ ಹಂಚಿಕೆ ದರದ ಶೇ. 44 ರಷ್ಟು, ಆರ್ಥಿಕವಾಗಿ ಹಿಂದುಳಿದ ವರ್ಗಗಳ ಅರ್ಜಿದಾರರಿಗೆ ಶೇ 25 ರಷ್ಟು ರಿಯಾಯಿತಿಗಳನ್ನು 1 ಬಿಹೆಚ್‌ಕೆ ಮನೆಗಳ ಹಂಚಿಕೆಯಲ್ಲಿ ನೀಡಲಾಗಿದೆ ಎಂದರು.

ಹುಕ್ಕೇರಿ ಶಾಸಕ ಉಮೇಶ್ ಕತ್ತಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು, ರಾಜ್ಯದಲ್ಲಿ ಒಟ್ಟು 20 ವಾಣಿಜ್ಯ ತೆರಿಗೆ ಚೆಕ್‌ಪೋಸ್ಟ್‌ಗಳಿದ್ದು, ಎಲ್ಲಾ ಚೆಕ್‌ಪೋಸ್ಟ್‌ಗಳನ್ನೂ ಗಣಕೀಕರಣಗೊಳಿಸಲಾಗಿದೆ ಎಂದರು.

ಮಾಗಡಿ ಶಾಸಕ ಹೆಚ್.ಸಿ. ಬಾಲಕೃಷ್ಣ ಅವರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಮಾಗಡಿ ಪಟ್ಟಣದಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಕೇಂದ್ರಕ್ಕೆ ಮೇಲನಹಳ್ಳಿ ಗ್ರಾಮದ ಸರ್ವೆ ನಂ. 22 ರಲ್ಲಿ 1 ಎಕರೆ 2 ಗುಂಟೆ ಸರ್ಕಾರಿ ಜಮೀನು ಮಂಜೂರಾಗಿದ್ದು, ನಬಾರ್ಡ್ ಯೋಜನೆಯಡಿ ರೂ. 4.2 ಕೋಟಿ ರೂ. ವೆಚ್ಚದಲ್ಲಿ ಕಟ್ಟಡ ನಿರ್ಮಾಣವನ್ನು ಸದರಿ ಸಾಲಿನಲ್ಲಿ ಕೈಗೊಳ್ಳಲಾಗುವುದು ಎಂದರು.

ಗುಬ್ಬಿ ಶಾಸಕರಾದ ಶ್ರೀನಿವಾಸ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು 2017–18 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಗುಬ್ಬಿ ತಾಲ್ಲೂಕು ಸೇರಿದಂತೆ, ಸರ್ಕಾರಿ/ಅನುದಾನಿತ ಐಟಿಐಗಳಿಲ್ಲದ 11 ತಾಲ್ಲೂಕುಗಳಲ್ಲಿ ಹೊಸದಾಗಿ ಸರ್ಕಾರಿ ಐಟಿಐಗಳನ್ನು ಸ್ಥಾಪಿಸಲಾಗುವುದು ಎಂದರು.

ಮಂಗಳೂರು ನಗರದ (ಉತ್ತರ) ಶಾಸಕ ಮೊಹಿದ್ದೀನ್ ಬಾವಾ ಅವರು ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಪ್ರಸ್ತುತ ಕೌಶಲ್ಯ ಕರ್ನಾಟಕ ಯೋಜನೆಯಡಿ ಕೌಶಲ್ಯ ಕರ್ನಾಟಕ ನೋಂದಣಿ ಅಭಿಯಾನ ಕಾರ್ಯಕ್ರಮ ಪ್ರಾರಂಭಿಸಿದ್ದು, ದಿನಾಂಕ: 06–06–2017 ರವರೆಗೆ ರಾಜ್ಯದ 506418 ಯುವಕ/ಯುವತಿಯರು ತರಬೇತಿ ಪಡೆಯಲು ನೋಂದಣಿ ಮಾಡಿಕೊಂಡಿದ್ದು, ಪ್ರತಿ ಅಭ್ಯರ್ಥಿಗೆ ಅವರು ಇಚ್ಛಿಸುವ 5 ತರಬೇತಿ ಕೋರ್ಸ್‌ಗಳ ಆಯ್ಕೆಗೆ ಅವಕಾಶ ನೀಡಲಾಗಿದೆ ಎಂದ ಅವರು ತರಬೇತಿಯ ನಂತರ ಸಂಬಂಧಿತ ಉದ್ಯೋಗಾವಕಾಶ ಒದಗಿಸಲಾಗುವುದೆಂದರು.

ರಾಯಚೂರು ನಗರ ಶಾಸಕ ಡಾ. ಶಿವರಾಜ್ ಪಾಟೀಲ್ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ನಗರಾಭಿವೃದ್ಧಿ ಸಚಿವ ರೋಷನ್ ಬೇಗ್, ರಾಯಚೂರು ನಗರದಲ್ಲಿ 24/7 ಕುಡಿಯುವ ನೀರು ಸರಬರಾಜು ಯೋಜನೆಯ ಕಾಮಗಾರಿಯನ್ನು ಮೆ: ಎಸ್. ಪಿ.ಎಂ.ಎಲ್ ಇನ್ಫ್ರಾ ಪ್ರೈ ಲಿ. ನವದೆಹಲಿ ಇವರಿಗೆ ವಹಿಸಿದ್ದು, ಕಾಮಗಾರಿಯನ್ನು ಪೂರ್ಣಗೊಳಿಸಲು ದಿನಾಂಕ 27–08–2017 ನ್ನು ನಿಗಿದಿಪಡಿಸಲಾಗಿದೆ.

ರಾಜಾಜಿನಗರ ಶಾಸಕ ಸುರೇಶ್‌ಕುಮಾರ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಬೆಂಗಳೂರು ಅಭಿವೃದ್ಧಿ ಸಚಿವರಾದ ಕೆ.ಜೆ. ಜಾರ್ಜ್, ಬೆಂಗಳೂರು ಮೆಟ್ರೋ ರೈಲು ಯೋಜನೆ ಹಂತ –1 ರ ಎಲ್ಲಾ ಕಾಮಗಾರಿಗಳು ಪೂರ್ಣಗೊಂಡಿದ್ದು, ಮೆಟ್ರೋ ರೈಲು ಸುರಕ್ಷತೆ ಆಯುಕ್ತರಿಂದ ಪ್ರಮಾಣ ಪತ್ರ ಪಡೆದು ದಿನಾಂಕ 18–06–2017 ರಿಂದ ಪೂರ್ಣ ಪ್ರಮಾಣದ ರೈಲು ಸೇವೆಯನ್ನು ಸಾರ್ವಜನಿಕರಿಗೆ ಒದಗಿಸಲಾಗುವುದು ಎಂದರು.

ಚಿಕ್ಕಮಗಳೂರು ಶಾಸಕ ಸಿ.ಟಿ. ರವಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವ ಜಿ. ಪರಮೇಶ್ವರ್ ಬೆಳಗಾವಿ ಜಿಲ್ಲೆಯ ಅಥಣಿ ಶಹರದಲ್ಲಿ ಹೊಸದಾಗಿ ಗ್ರಾಮಾಂತರ ಪೊಲೀಸ್ ಠಾಣೆ ತೆರೆಯುವ ಬಗ್ಗೆ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ ಎಂದರು.

ಸಂಜಯ್ ಪಾಟೀಲ್, ಬೆಳಗಾವಿ ಗ್ರಾಮಾಂತರ ಶಾಸಕರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವರು, ಪೊಲೀಸ್ ಇಲಾಖಾ ನೇಮಕಾತಿಯಲ್ಲಿ ಏಕಗವಾಕ್ಷಿ ಪದ್ಧತಿಯನ್ನು ಜಾರಿಗೊಳಿಸಲು ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು, ನೇಮಕಾತಿ ಇವರ ಅಧ್ಯಕ್ಷತೆಯಲ್ಲಿ ದಿನಾಂಕ 18–04–2017 ರಂದು ಸಮಿತಿಯನ್ನು ರಚಿಸಿದ್ದು ವರದಿ ಬಂದ ನಂತರ ಏಕಗವಾಕ್ಷಿ ಪದ್ಧತಿಯನ್ನು ಅಳವಡಿಸಲಾಗುವುದೆಂದರು.

ಮಡಿಕೇರಿ ಶಾಸಕ ಅಪ್ಪಚ್ಚುರಂಜನ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವರು ರಾಜ್ಯದಲ್ಲಿ ಮಾದಕ ದ್ರವ್ಯ ನಿಯಂತ್ರಣ ಮಾಡುವ ಸಲುವಾಗಿ ಸಿಐಡಿ ಘಟಕದಲ್ಲಿ ಎಸ್‌ಪಿ ಮೇಲ್ವಿಚಾರಣೆಯಲ್ಲಿ ನಾರ್ಕೋಟಿಕ್ ವಿಭಾಗ ತೆರೆಯಲಾಗಿದ್ದು, ಬೆಂಗಳೂರು, ಮಂಗಳೂರು ಮತ್ತು ಬೆಳಗಾವಿಯಲ್ಲಿ ಪೊಲೀಸ್ ಇನ್‌ಪೆಕ್ಟರ್ ದರ್ಜೆಯ ಅಧಿಕಾರಿ ಮತ್ತು ಸಿಬ್ಬಂದಿಯನ್ನು ಮಾದಕ ದ್ರವ್ಯ ನಿಯಂತ್ರಣಕ್ಕಾಗಿ ನೇಮಿಸಲಾಗಿರುತ್ತದೆ ಎಂದರು. ಶಾಲಾ ಕಾಲೇಜುಗಳ ಆವರಣದಿಂದ 100 ಯಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ತಂಬಾಕು ಮತ್ತು ಇತರೆ ಮಾದಕ ವಸ್ತುಗಳನ್ನು ಮಾರಾಟ ಮಾಡದಂತೆ ಎಚ್ಚರಿಕೆಯ ಫಲಕಗಳನ್ನು ಹಾಕಲಾಗಿದ್ದು, ನಿಯಮ ಉಲ್ಲಂಘಿಸುವರ ಮೇಲೆ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುತ್ತಿದೆ ಎಂದರು.

ಕಳೆದ 3 ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಗಾಂಜಾ ಮಾರಾಟ ಮಾಡಲಾದ ಒಟ್ಟು ಪ್ರಕರಣಗಳ ಸಂಖ್ಯೆ 30 ಆಗಿದ್ದು, ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು, ಪ್ರಕರಣಗಳ ವಿಚಾರಣೆ ನಡೆಯುತ್ತಿರುತ್ತದೆ. 2016 ರಲ್ಲಿ ಒಂದು ಪ್ರಕರಣದಲ್ಲಿ ಆರೋಪಿಗೆ ನ್ಯಾಯಾಲಯದಲ್ಲಿ ಶಿಕ್ಷೆ ಹಾಗೂ ದಂಡ ವಿಧಿಸಿದೆ ಎಂದರು.

ಎಸ್‌ಎಂ:ಜೆಡಿ:ಜಿಪಿಆರ್.

# ಕೆ.ಎ.ಎಸ್ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಬೆಂಗಳೂರು, ಜೂನ್ 13, (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಪ್ರೊಬೇಷನರ್ಸ್ 2015-16 ನೇ ಸಾಲಿನ ಗ್ರೂಪ್ 'ಎ' ಮತ್ತು 'ಬಿ' ವೃಂದದ 401 ಹುದ್ದೆಗಳನ್ನು ಭರ್ತಿಮಾಡಲು ಅಧಿಸೂಚನೆ ಹೊರಡಿಸಿದ್ದು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 12-06-2017 ಮತ್ತು ಶುಲ್ಕ ಪಾವತಿಸಲು ಕೊನೆಯ ದಿನಾಂಕ: 13-06-2017 ಎಂದು ನಿಗದಿಪಡಿಸಲಾಗಿತ್ತು. ಈಗಾಗಲೇ ಅಧಿಸೂಚಿಸಿದ ಹುದ್ದೆಗಳೊಂದಿಗೆ ಇನ್ನೂ 10 ಕೆ.ಎ.ಎಸ್. (ಕಿರಿಯ ಶ್ರೇಣಿ) ಸಹಾಯಕ ಆಯುಕ್ತರ ಹುದ್ದೆಗಳು ಹಾಗೂ 12 (ಮೂ.ವೃ) ಮುಖ್ಯಾಧಿಕಾರಿ ಶ್ರೇಣಿ – 1 ರ ಹುದ್ದೆಗಳನ್ನು ಈಗಾಗಲೇ ಅಧಿಸೂಚಿಸಿದ ಹುದ್ದೆಗಳಿಗೆ ಸೇರಿಸಿ ಸೇರ್ಪಡೆ ಅಧಿಸೂಚನೆಯನ್ನು ಹೊರಡಿಸಿದೆ.

ಸರ್ಕಾರದ ಆದೇಶದಂತೆ ಈ ಅಧಿಸೂಚನೆಗೆ ಅನುಗುಣವಾಗಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಅಭ್ಯರ್ಥಿಗಳಿಗೆ ಹೆಚ್ಚುವರಿಯಾಗಿ ಒಂದು ವರ್ಷದ ವಯೋಮಿತಿ ಸಡಿಲಿಕೆಯನ್ನು ನೀಡಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು 27-06-2017 ಮತ್ತು ಶುಲ್ಕ ಪಾವತಿಸಲು 28-06-2017 ರವರೆಗೆ ವಿಸ್ತರಿಸಿ ಜೂನ್ 12 ರಂದು ತಿದ್ದುಪಡಿ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಹೆಚ್ಚಿನ ವಿವರಗಳಿಗೆ ಆಯೋಗದ ವೆಬ್‌ಸೈಟ್ http://kpsc.kar.nic.in/Notification ಅನ್ನು ನೋಡಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಅಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# ಸಚಿವರ ಪ್ರವಾಸ

ಬೆಂಗಳೂರು, ಜೂನ್ 13, (ಕರ್ನಾಟಕ ವಾರ್ತೆ)

ಯೋಜನೆ, ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರೂ ಆದ ಎಂ.ಆರ್. ಸೀತಾರಾಂ ಅವರು ಜೂನ್ 17 ಮತ್ತು 18 ರಂದು ಶಿವಮೊಗ್ಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಳ್ಳಲಿರುವ ಸಚಿವರು ಜೂನ್ 18 ರಂದೇ ನಗರಕ್ಕೆ ಹಿಂದಿರುಗುವರು.

ಎಸ್‌ಎಂ:ಜೆಡಿ:ಜಿಪಿಆರ್.

# ಜನ ಸಾಮಾನ್ಯರ ಅನುಕೂಲಕ್ಕಾಗಿ ಮಾಸಿಕ ಲೋಕ್ ಅದಾಲತ್

ಬೆಂಗಳೂರು, ಜೂನ್ 13, (ಕರ್ನಾಟಕ ವಾರ್ತೆ)

ಜನಸಾಮಾನ್ಯರ ಅನುಕೂಲಕ್ಕಾಗಿ ಪ್ರತಿ ತಿಂಗಳು ಮಾಸಿಕ ಲೋಕ್ ಅದಾಲತನ್ನು ನಡೆಸುತ್ತಿದ್ದು, ಈ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ರಾಜ್ಯದ ಎಲ್ಲಾ ನ್ಯಾಯಾಲಯಗಳಲ್ಲಿ ಜೂನ್ 10 ರಂದು ನ್ಯಾಯಾಲಯದ ವೇಳೆಯ ನಂತರ ಎಲ್ಲಾ ರೀತಿಯ ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣಗಳನ್ನು ಹಾಗೂ ಇನ್ನಿತರೆ ಪ್ರಕರಣಗಳನ್ನು ಉಚ್ಛ ನ್ಯಾಯಾಲಯದ ಕಾನೂನು ಸೇವಾ ಸಮಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ತಾಲ್ಲೂಕು ಕಾನೂನು ಸೇವಾ ಸಮಿತಿ ಹಾಗೂಈ ಖಾಯಂ ಜನತಾ ನ್ಯಾಯಾಲಯಗಳಲ್ಲಿ ರಾಜೀ ಸಂಧಾನದ ಮೂಲಕ ಇತ್ಯರ್ಥ ಪಡಿಸಲು ಲೋಕ್ ಅದಾಲತ್ ಏರ್ಪಡಿಸಲಾಗಿತ್ತು.

ಸದರಿ ಲೋಕ ಅದಾಲತ್‌ನಲ್ಲಿ ಇತ್ಯರ್ಥವಾದ ಪ್ರಕರಣಗಳ ವಿವರ : ನ್ಯಾಯಾಲಯದಲ್ಲಿ ಬಾಕಿ ಇದ್ದ ಪ್ರಕರಣಗಳು – 7.726, ವ್ಯಾಜ್ಯ ಪೂರ್ವ ಪ್ರಕರಣಗಳು – 1,453, ಒಟ್ಟು ಪ್ರಕರಣಗಳು – 9,179, ರಾಜಿಯಾದ ಮೊತ್ತ ರೂ. 28,67,55,684/–

ಲೋಕ್ ಅದಾಲತ್‌ನಲ್ಲಿ ಹೆಚ್ಚಿನ ಪ್ರಕರಣಗಳು ವಿಲೇವಾರಿಯಾಗಿರುವುದರಿಂದ ಜನಸಾಮಾನ್ಯರಿಗೆ ಅನುಕೂಲವಾಗಿರುವುದಲ್ಲದೇ ನ್ಯಾಯಾಲಯಗಳ ಮೇಲಿನ ಪ್ರಕರಣಗಳ ಹೊರೆ ಗಣನೀಯವಾಗಿ ತಗ್ಗಿದೆ.

ಈ ಲೋಕ ಅದಾಲತ್‌ನ ಯಶಸ್ಸಿಗೆ ಶ್ರಮಿಸಿದ ನ್ಯಾಯಾಧೀಶರಿಗೆ, ವಕೀಲರಿಗೆ, ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳಿಗೆ ನ್ಯಾಯಾಲಯದ ಸಿಬ್ಬಂದಿಯವರಿಗೆ ಹಾಗೂ ಪರಿಹಾರ ಪಡೆದ ಎಲ್ಲಾ ಜನರಿಗೆ ಕರ್ನಾಟಕ ರಾಜ್ಯದ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳಾದ ಶ್ರೀ ಸುಬ್ರೋ ಕಮಲ್ ಮುಖರ್ಜಿ ಮತ್ತು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷರಾದ ನ್ಯಾಯಮೂರ್ತಿ ಶ್ರೀ ಜಯಂತ್ ಪಟೇಲ್ ರವರು ಹಾಗೂ ಕರ್ನಾಟಕ ರಾಜ್ಯದ ಉಚ್ಚ ನ್ಯಾಯಾಲಯ ಕಾನೂನು ಸೇವೆಗಳ ಸಮಿತಿಯ ಅಧ್ಯಕ್ಷರಾದ ಶ್ರೀ ನ್ಯಾಯಮೂರ್ತಿ ಎಲ್. ನಾರಾಯಣ ಸ್ವಾಮಿ ರವರು ಅಭಿನಂದನೆ ಸಲ್ಲಿಸಿದ್ದಾರೆ. ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಮತ್ತು ಜನಸಾಮಾನ್ಯರಿಗೆ ಜುಲೈ 8 ರಂದು ಎಲ್ಲಾ ರೀತಿಯ ಸಿವಿಲ್, ಕ್ರಿಮಿನಲ್ ಪ್ರಕರಣಗಳನ್ನು (ಬಾಕಿ ಇರುವ ಪ್ರಕರಣಗಳು ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಕ್ಕಾಗಿ ನಡೆಸಲಾಗುವುದು ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಭಾಗವಹಿಸಿದ ಸದರಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕೋರಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್.

# ಜೂನ್ 12 ರಿಂದ 24 ರವರೆಗೆ
# ಅತಿಸಾರಭೇದಿ ನಿಯಂತ್ರಣ ಪಾಕ್ಷಿಕ

ಬೆಂಗಳೂರು, ಜೂನ್ 13, (ಕರ್ನಾಟಕ ವಾರ್ತೆ)

ಅತಿಸಾರಭೇದಿಯ ಒಂದು ತಡೆಗಟ್ಟಬಹುದಾದ ಕಾಯಿಲೆಯಾಗಿದೆ ಅತಿಸಾರಭೇದಿಯಿಂದಾಗಿ ಪ್ರತಿ ವರ್ಷ ಭಾರತದಾದ್ಯಂತ 1.2 ಲಕ್ಷ ಮಕ್ಕಳು ಸಾವನ್ನಪ್ಪುತ್ತಿದ್ದಾರೆ. ಸೊನ್ನೆಯಿಂದ ಐದು ವರ್ಷದ ಮಕ್ಕಳಲ್ಲಿ ಉಂಟಾಗುವ ಸಾವುಗಳಲ್ಲಿ ಶೇ 10 ರಷ್ಟು ಅತಿಸಾರಭೇದಿಯಿಂದ ಉಂಟಾಗುತ್ತದೆ.

ಶೇ 100 ಕ್ಕೆ 100 ರಷ್ಟು ಅತಿಸಾರಭೇದಿಯನ್ನು ತಡೆಗಟ್ಟಿ 'ಅತಿಸಾರಭೇದಿಯಿಂದ ಶೂನ್ಯ ಮಕ್ಕಳ ಮರಣ' ಎಂಬ ಧ್ಯೇಯವನ್ನು ಸಾಧಿಸಬಹುದಾಗಿದೆ. ಈ ನಿಟ್ಟಿನಲ್ಲಿ ಅತಿಸಾರ ಭೇದಿಯ ನಿಯಂತ್ರಣಾ ಪಾಕ್ಷಿಕ ಕಾರ್ಯಕ್ರಮವನ್ನು ಜೂನ್ 12 ರಿಂದ 24 ರವರೆಗೆ ರಾಜ್ಯಾದ್ಯಂತ ಆಚರಿಸಲಾಗುತ್ತಿದೆ.

ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ನಗರಾಭಿವೃದ್ಧಿ ಇಲಾಖೆ, ಯುನಿಸೆಫ್, ಭಾರತೀಯ ಶಿಶುವೈದ್ಯ ಸಂಘ, ಭಾರತೀಯ ವೈದ್ಯಕೀಯ ಸಂಘ ಇವರುಗಳು ಕೂಡ ಪಾಕ್ಷಿಕವನ್ನು ಯಶ್ವಿಗೊಳಿಸಲು ಕೈಜೋಡಿಸಿದ್ದಾರೆ. ದಿನಾಂಕ 14-06-2017 ರಂದು ಸರ್ಕಾರಿ ಶುಶ್ರೂಷ ಮಹಾವಿದ್ಯಾಲಯ ಸಭಾಂಗಣ, ವಿಕ್ಟೋರಿಯಾ ಆಸ್ಪತ್ರೆ ಆವರಣ, ಬೆಂಗಳೂರು ಇಲ್ಲಿ ಪಾಕ್ಷಿಕವನ್ನು ಸಾಂಕೇತಿಕವಾಗಿ ಉದ್ಘಾಟಿಸಲಾಗುತ್ತಿದೆ.

ಅತಿಸಾರಭೇದಿ ನಿಯಂತ್ರಣ:

- ಹುಟ್ಟಿದ ಒಂದು ಗಂಟೆಯಿಂದ 6 ತಿಂಗಳವರೆಗೆ ಶಿಶುವಿಗೆ ಕೇವಲ ಎದೆಹಾಲನ್ನು ನೀಡುವುದು.
- 6 ತಿಂಗಳಿಗೆ ಪೂರಕ ಆಹಾರವನ್ನು ನೀಡುವುದು.
- ಮಗುವಿನ ಆಹಾರ ತಯಾರಿಸುವಾಗಿ ಕೈಗಳ ಶುಚಿತ್ವ ಕಾಪಾಡಿಕೊಳ್ಳುವುದು. ಮನೆಯಲ್ಲೇ ಶೌಚಾಲಯ ಹೊಂದಿ ಬಯಲು ಮಲ ವಿಸರ್ಜನೆಯನ್ನು ಕೊನೆಗಾಣಿಸುವುದು.
- ಆರೋಗ್ಯ ಇಲಾಖೆಯಲ್ಲಿ ಉಚಿತವಾಗಿ ಲಭ್ಯವಿರುವ ಎಲ್ಲಾ ಲಸಿಕೆಗಳು, ಮುಖ್ಯವಾಗಿ ದಡಾರ ಲಸಿಕೆ, ವಿಟಮಿನ್ 'ಎ' ದ್ರಾವಣ ನೀಡುವುದು.
- ಸೂಕ್ತ ರೀತಿಯಲ್ಲಿ ಮನೆಯಲ್ಲಿಯೇ ಸಿಗುವ ಆಹಾರವನ್ನು ನೀಡುವುದರ ಮೂಲಕ ಹಾಗೂ ಎದೆಹಾಲು ಕುಡಿಸುವುದನ್ನು ಮುಂದುವರೆಸುವುದು.
- ಅತಿಸಾರಭೇದಿಯಾದಾಗ, ಓ.ಆರ್.ಎಸ್. ದ್ರಾವಣ ಮತ್ತು ಝಿಂಕ್ ಮಾತ್ರೆಗಳನ್ನು ನೀಡುವುದು.

ಕರ್ನಾಟಕ ರಾಜ್ಯದಲ್ಲಿ ಐದು ವರ್ಷದೊಳಗಿನ ಮಕ್ಕಳ ಸಂಖ್ಯೆ ಅಂದಾಜು 74 ಲಕ್ಷ ಇದ್ದು, ಈ ಪಾಕ್ಷಿಕದಲ್ಲಿ ಎಲ್ಲಾ ಐದು ವರ್ಷದೊಳಗಿಬನ ಮಕ್ಕಳ ಹಾಗೂ ಅತಿಸಾರಭೇದಿಯಿಂದ ಬಳಲುತ್ತಿರುವ ಮಕ್ಕಳು ಫಲಾನುಭವಿಗಳಾಗಿರುತ್ತಾರೆ. 11000 ಓ.ಆರ್.ಎಸ್. ಮತ್ತು ಝಿಂಕ್ ಕಾರ್ನರ್‌ಗಳನ್ನು ಸ್ಥಾಪಿಸಲಾಗಿದೆ. ಈ ಪಾಕ್ಷಿಕದಲ್ಲಿ ಈ ಕೆಳಕಂಡ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ.

- ಆಶಾ ಕಾರ್ಯಕರ್ತೆಯರು ಮನೆ-ಮನೆಗೂ ಭೇಟಿನೀಡಿ ಐದು ವರ್ಷದೊಳಗಿನ ಮಕ್ಕಳಿರುವ ಮನೆಗಳಲ್ಲಿ ಓ.ಆರ್.ಎಸ್. ಪ್ಯಾಕೆಟ್ ಅನ್ನು ದಾಸ್ತಾನು ಇರಿಸಿ ಅತಿಸಾರಭೇದಿಯಾದಾಗ ಬಳಸಲು ಹಾಗೂ ಬಳಸುವ ವಿಧಾನವನ್ನು ಪ್ರಾತ್ಯಕ್ಷತೆ ಮೂಲಕ ವಿವರಿಸುತ್ತಾರೆ.
- ಅಂಗನವಾಡಿ ಕಾರ್ಯಕರ್ತೆಯರ ಸಹಯೋಗದೊಂದಿಗೆ ತಾಯಂದಿರಿಗೆ ಹಾಗೂ ಮಕ್ಕಳಿಗೆ ಕೈ ತೊಳೆಯುವುದರ ಸರಿಯಾದ ವಿಧಾನ ಹಾಗು ಮಹತ್ವ ಶೌಚಾಲಯ ಬಳಕೆ ಮತ್ತು ಶುಚಿತ್ವ ಹಾಗೂ ಆಹಾರ ಸಂರಕ್ಷಣೆ ಹಾಗೂ ಪರಿಸರ ಸ್ವಚ್ಛತೆಯ ಬಗ್ಗೆ ಅರಿವನ್ನು ಮೂಡಿಸುತ್ತಾರೆ.
- ಎಲ್ಲಾ ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಓ.ಆರ್.ಎಸ್. ಮತ್ತು ಝಿಂಕ್ ಕಾರ್ನರ್‌ಗಳನ್ನು ಸ್ಥಾಪಿಸಿ ಅತಿಸಾರಭೇದಿಯಿಂದ ಬಳಲುತ್ತಿರುವ ಮಕ್ಕಳಿಗೆ ಸೂಕ್ತ ಚಿಕಿತ್ಸೆ ನೀಡಲಾಗುತ್ತದೆ.

- ಆಸ್ಪತ್ರೆಗಳಲ್ಲಿ ತೀವ್ರ ನಿರ್ಜಲೀಕರಣದಿಂದ ಬಳಲುತ್ತಿರುವ ಮಕ್ಕಳನ್ನು ಗುರುತಿಸಿ ಸೂಕ್ತ ಚಿಕಿತ್ಸೆ ನೀಡಲಾಗುತ್ತದೆ.
- ಖಾಸಗಿ ಮಕ್ಕ ವೈದ್ಯರು ಕೂಡ ಓ.ಆರ್.ಎಸ್. ಮತ್ತು ಝಿಂಕ್ ಕಾರ್ನರ್‌ಗಣನ್ನು ತೆರೆದು ಈ ರಾಷ್ಟ್ರೀಯ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುತ್ತಾರೆ.
- ಶಾಲೆಗಳಲ್ಲಿ ಮಕ್ಕಳಿಗೆ ಕೈ ತೊಳೆಯುವುದರ ಸರಿಯಾದ ವಿಧಾನ ಹಾಗೂ ಮಹತ್ವದ ಬವಗ್ಗೆ ಪ್ರಾತ್ಯಕ್ಷತೆ ಮೂಲಕ ಅರಿವನ್ನು ಮೂಡಿಸಲಾಗುವುದು.
- ಸಂಚಾರಿ ವಾಹನವನ್ನು ಗುಡ್ಡಗಾಡು, ದುರ್ಗಮ, ವಲಸೆ ಪ್ರದೇಶ ಜನರನ್ನು ತಲುಪಲು ಬಳಸಲಾಗುವುದು.

ಬಯಲು ಮಲ ವಿಸರ್ಜನೆ ಕೊನೆಗಾಣಿಸುವುದು, ಸ್ವಚ್ಚತೆ ಕಾಪಾಡಿಕೊಳ್ಳುವುದು ಹಾಗೂ ಸ್ವಚ್ಛ ಕೈಗಳ ಮೂಲಕ ಮಕ್ಕಳಿಗೆ ಸಂಪೂರ್ಣ ಲಸಿಕೆ ಹಾಕುವುದರ ಮೂಲಕ ಅತಿಸಾರಭೇದಿಯನ್ನು ತಡೆಗಟ್ಟಿ. ಅತಿಸಾರಭೇದಿ ಆದಕೂಡಲೇ ಓ.ಆರ್.ಎಸ್. ಝಿಂಕ್ ಮಾತ್ರೆ ಕೊಡುವುದರ ಮೂಲಕ ಮಕ್ಕಳಲ್ಲಿ ಸಾವನ್ನು ತಡೆಗಟ್ಟಬಹುದಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# ಆಯ್ಕೆಪಟ್ಟಿ ಪ್ರಕಟ

**ಬೆಂಗಳೂರು, ಜೂನ್ 13 (ಕರ್ನಾಟಕ ವಾರ್ತೆ)**

**ಕರ್ನಾಟಕ ಲೋಕಸೇವಾ ಆಯೋಗ ಅಧಿಸೂಚನೆ 03–03–2016 ರಲ್ಲಿ ಅಧಿಸೂಚಿಸಿರುವ ಪೌರಾಡಳಿತ ಇಲಾಖೆಯಲ್ಲಿನ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಪ್ರಥಮ ದರ್ಜೆ ಕಂದಾಯ ನಿರೀಕ್ಷಕರು 23 (12+11 ಹೈ.ಕ.) ಮತ್ತು ಪೌರಾಡಳಿತ ಇಲಾಖೆಯಲ್ಲಿನ ಮಹಾನಗರ ಪಾಲಿಕೆಯಲ್ಲಿನ ಪ್ರಥಮ ದರ್ಜೆ ಕಂದಾಯ ನಿರೀಕ್ಷಕರು 58 (52 + 06 ಹೈ.ಕ.) ಮತ್ತು ಪೌರಾಡಳಿತ ಇಲಾಖೆಯಲ್ಲಿನ ಮಹಾನಗರ ಪಾಲಿಕೆಗಳಲ್ಲಿನ ತೋಟಗಾರಿಕೆ ನಿರೀಕ್ಷಕರು 24 (21+03 ಹೈ.ಕ.) ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ಆಯೋಗದ ವೆಬ್‌ಸೈಟ್ www.kpsc.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.**